# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 251 | Pages. 2 | Date: 18-09-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 251 - ಪುಟಗಳು : 2 | 18-09-2026 ಶುಕ್ರವಾರ | Ph: 8762954248 | ದರ : ₹1


# ವಾಟೇಹೊಳೆ ಜಲಾಶಯದಿಂದ ತಕ್ಷಣ ನೀರು ಬಿಡಿ

## ಜಲಸಂಪನ್ಮೂಲ ಸಚಿವ ಚಲುವರಾಯ ಸ್ವಾಮಿಗೆ ಸಿಮೆಂಟ್ ಮಂಜು ಒತ್ತಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ವಾಟೇಹೊಳೆ ಜಲಾಶಯದಲ್ಲಿ ಲಭ್ಯವಿರುವ ನೀರನ್ನು ತಕ್ಷಣವೇ ಬಿಡುಗಡೆ ಮಾಡಿ ರೈತರ ನೆರವಿಗೆ ಧಾವಿಸಬೇಕು ಎಂದು ಶಾಸಕ ಸಿಮೆಂಟ್ ಮಂಜು, ಜಲಸಂಪನ್ಮೂಲ ಸಚಿವ ಚೆಲುವರಾಯಸ್ವಾಮಿ ಅವರ ಎದುರೇ ಒತ್ತಾಯಿಸಿದರು.

ತಾಲೂಕಿನ ಬೆಳಗೋಡು ಹೋಬಳಿಯ ಹೆಬ್ಬನಹಳ್ಳಿ ಸಮೀಪದ ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯ ವಿದ್ಯುತ್ ವಿತರಣಾ ಕೇಂದ್ರಕ್ಕೆ ಸಚಿವರು ಭೇಟಿ ನೀಡಿದ ಸಂದರ್ಭದಲ್ಲಿ ಕ್ಷೇತ್ರದ ನೀರಿನ ಸಮಸ್ಯೆಯನ್ನು ಪ್ರಸ್ತಾಪಿಸಿದ ಶಾಸಕರು, ವಾಟೇಹೊಳೆ ಜಲಾಶಯದಿಂದ ತುರ್ತಾಗಿ ನೀರು ಹರಿಸುವಂತೆ ಮನವಿ ಮಾಡಿದರು.





ವಾಟೇಹೊಳೆ ಜಲಾಶಯದ ಸಾಮರ್ಥ್ಯ ಸುಮಾರು 1.5 ಟಿಎಂಸಿ ಇದ್ದು, ಪ್ರಸ್ತುತ ಶೇ.60ಕ್ಕೂ ಹೆಚ್ಚು ನೀರು ಸಂಗ್ರಹವಾಗಿದೆ. ಈ ನೀರನ್ನು ಬರ ಪರಿಸ್ಥಿತಿ ಎದುರಿಸುತ್ತಿರುವ ರೈತರು ಹಾಗೂ ಸಾರ್ವಜನಿಕರ ಅಗತ್ಯಕ್ಕೆ ಬಳಸಬೇಕು. ಸುಮಾರು 18 ಸಾವಿರ ಎಕರೆ ಪ್ರದೇಶಕ್ಕೆ ನೀರು ಒದಗಿಸುವ ಉದ್ದೇಶವಿದ್ದರೂ, ಇನ್ನೂ ಸುಮಾರು 5 ಸಾವಿರ ಎಕರೆ ಪ್ರದೇಶಕ್ಕೆ ನೀರು ತಲುಪಿಸಲು ಕಾಲುವೆಗಳ ನವೀಕರಣ ಅಗತ್ಯವಿದೆ. ಈ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಸಿಮೆಂಟ್ ಮಂಜು ಆಗ್ರಹಿಸಿದರು.

**'ರೈತರಿಗೆ ನೀರು ಕೊಡಿ'**

ಬರದಿಂದಾಗಿ ಕೆರೆ-ಕಟ್ಟೆಗಳಲ್ಲಿ ನೀರಿನ ಕೊರತೆ ಉಂಟಾಗಿದ್ದು, ಕೃಷಿ ಚಟುವಟಿಕೆಗಳ ಜತೆಗೆ ಜಾನುವಾರುಗಳಿಗೂ ನೀರಿನ ಸಮಸ್ಯೆ ಎದುರಾಗಿದೆ. ಜಲಾಶಯದಲ್ಲಿ ರೈತರ ಬಳಕೆಗೆ ಲಭ್ಯವಿರುವ ನೀರನ್ನು ಹಿಡಿದಿಟ್ಟುಕೊಳ್ಳುವುದಕ್ಕಿಂತ ಅಗತ್ಯವಿರುವ ಸಂದರ್ಭದಲ್ಲಿ ಬಿಡುಗಡೆ ಮಾಡುವುದು ಸೂಕ್ತ. ಹೀಗಾಗಿ ಯಾವುದೇ ವಿಳಂಬ ಮಾಡದೆ ನೀರು ಹರಿಸಬೇಕು ಎಂದು ಸಚಿವರ ಗಮನ ಸೆಳೆದರು.

ಕಾವೇರಿ ನೀರಾವರಿ ನಿರ್ವಹಣೆಗೆ ಸಂಬಂಧಿಸಿದ ಇತ್ತೀಚಿನ ಸಭೆಗಳಲ್ಲಿಯೂ ಈ ವಿಷಯವನ್ನು ಸಚಿವರ ಗಮನಕ್ಕೆ ತಂದಿದ್ದೇನೆ. ದೂರವಾಣಿ ಮೂಲಕವೂ ಹಲವು ಬಾರಿ ಮನವಿ ಮಾಡಿದ್ದೇನೆ. ಈಗ ಬರದ ತೀವ್ರತೆ ಹೆಚ್ಚಿರುವುದರಿಂದ ನೀರು ಬಿಡುಗಡೆ ವಿಚಾರದಲ್ಲಿ ತುರ್ತು ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

**'ನಮ್ಮ ಕ್ಷೇತ್ರದ ಹಕ್ಕನ್ನೂ ಪರಿಗಣಿಸಿ'**

ಗೊರೂರು ಜಲಾಶಯದಿಂದ ವಿವಿಧ ಪ್ರದೇಶಗಳಿಗೆ ನೀರು ಹರಿಸಲಾಗುತ್ತಿದೆ. ಜಲಾಶಯ ನಿರ್ಮಾಣಕ್ಕಾಗಿ ಸಕಲೇಶಪುರ ವಿಧಾನಸಭಾ ಕ್ಷೇತ್ರದ ಜನರು ದೊಡ್ಡ ಪ್ರಮಾಣದಲ್ಲಿ ಭೂಮಿ ಕಳೆದುಕೊಂಡಿದ್ದಾರೆ. ಹೀಗಿರುವಾಗ ಕ್ಷೇತ್ರದ ಜನರ ಕುಡಿಯುವ ನೀರು ಹಾಗೂ ಕೃಷಿ ಅಗತ್ಯಗಳಿಗೂ ಆದ್ಯತೆ ನೀಡಬೇಕು. ನೀರಿನ ವಿಚಾರದಲ್ಲಿ ನಮ್ಮ ಭಾಗದ ರೈತರ ಹಿತಾಸಕ್ತಿಯನ್ನು ಕಡೆಗಣಿಸಬಾರದು ಎಂದು ಸಿಮೆಂಟ್ ಮಂಜು ಸಚಿವರ ಗಮನಕ್ಕೆ ತಂದರು.



ಈ ವೇಳೆ ಮಾತನಾಡಿದ ಜಲಸಂಪನ್ಮೂಲ ಸಚಿವ ಚೆಲುವರಾಯಸ್ವಾಮಿ, ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ವಿವಿಧ ಯೋಜನೆಗಳ ಮೂಲಕ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುತ್ತಿದೆ. ಪ್ರತಿಯೊಂದು ಕ್ಷೇತ್ರಕ್ಕೂ ಪ್ರತ್ಯೇಕವಾಗಿ ಗಮನಹರಿಸಲು ಸಾಧ್ಯವಾಗದಿದ್ದರೂ ವಿವಿಧ ಇಲಾಖೆಗಳ ಬಜೆಟ್ ಮತ್ತು ಯೋಜನೆಗಳ ಮೂಲಕ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.





ಎತ್ತಿನಹೊಳೆ ಯೋಜನೆ ಸುಮಾರು 23 ಸಾವಿರ ಕೋಟಿ ವೆಚ್ಚದ ಮಹತ್ವದ ಯೋಜನೆಯಾಗಿದ್ದು, ಹಲವು ವರ್ಷಗಳಿಂದ ಬರ ಹಾಗೂ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಏಳು ಜಿಲ್ಲೆಗಳಿಗೆ ನೀರು ಒದಗಿಸುವ ಉದ್ದೇಶ ಹೊಂದಿದೆ. ಕುಡಿಯುವ ನೀರಿನಂತಹ ಮೂಲಭೂತ ಅಗತ್ಯ ಪೂರೈಸುವ ಈ ಯೋಜನೆ ಹಲವು ಜಿಲ್ಲೆಗಳ ಪಾಲಿಗೆ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಎರಡು-ಮೂರು ವರ್ಷಕ್ಕೊಮ್ಮೆ ಬರ ಪರಿಸ್ಥಿತಿ ಎದುರಾಗುತ್ತಿದೆ. ಪ್ರಕೃತಿ ಸದಾ ಅನುಕೂಲಕರವಾಗಿರಲು ಸಾಧ್ಯವಿಲ್ಲ. ಇಂತಹ ಸಂದರ್ಭದಲ್ಲಿ ಕುಡಿಯುವ ನೀರು ಹಾಗೂ ನೀರಾವರಿ ಯೋಜನೆಗಳ ಮೂಲಕ ಜನರಿಗೆ ಅಗತ್ಯ ಸೌಲಭ್ಯ ಕಲ್ಪಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಸಚಿವರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಾಟೀಲ್, ಶಾಸಕ ಹರೀಶ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ತಾಲೂಕು ಅಧ್ಯಕ್ಷ ಮುರುಳಿ ಮೋಹನ್, ತಹಸೀಲ್ದಾರ್



ಸುಪ್ರೀತ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಗಂಗಾಧರನ್ ಹಾಗೂ ಎತ್ತಿನಹೊಳೆ ಯೋಜನೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಅ.4 ರಂದು ಅಕ್ಷರ ಪುರಸ್ಕಾರ:ಗಂಗಾಧರ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಹಾಗೂ ಅವರಲ್ಲಿ ಓದುವ ಸಂಸ್ಕೃತಿ ಬೆಳೆಸುವ ಉದ್ದೇಶದಿಂದ ಕಳೆದ ಹತ್ತು ವರ್ಷಗಳಿಂದ ಅಕ್ಷರ ಬುಕ್ ಹೌಸ್ ವತಿಯಿಂದ ನೀಡಲಾಗುತ್ತಿರುವ ಅಕ್ಷರ ಪುರಸ್ಕಾರ ಕಾರ್ಯಕ್ರಮವನ್ನು

ಈ ಬಾರಿ ಅ.4 ರಂದು ಹಮ್ಮಿಕೊಳ್ಳಲಾಗಿದೆ ಎಂದು ಅಕ್ಷರ ಬುಕ್‌ಹೌಸ್ ಸಂಸ್ಥಾಪಕ ಟೈಮ್ಸ್ ಗಂಗಾಧರ್ ತಿಳಿಸಿದರು.



ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಜಿಲ್ಲೆಯಲ್ಲೇ ವ್ಯಾಸಂಗ ಮಾಡಿರುವ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳ ಪೈಕಿ ಆಯ್ದ 500 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಅವರಿಗೆ 8-10 ಪುಸ್ತಕಗಳನ್ನು ಬಹುಮಾನವಾಗಿ ನೀಡಿ ಗೌರವಿಸಲಾಗುವುದು ಎಂದರು.

ಅ.4 ರಂದು ಭಾನುವಾರ ನಗರದ ಗಾಂಧಿ ಭವನದಲ್ಲಿ ಅಕ್ಷರ ಪುರಸ್ಕಾರ ನಡೆಯಲಿದೆ. ವಿವಿಧ ಸಂಪನ್ಮೂಲ ವ್ಯಕ್ತಿಗಳ ಉಪಸ್ಥಿತಿಯಲ್ಲಿ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅಭಿನಂದಿಸಲಾಗುವುದು ಎಂದು ತಿಳಿಸಿದರು.

ಈ ಬಾರಿ ಶೇ.70ಕ್ಕಿಂತ ಹೆಚ್ಚು ಅಂಕ ಪಡೆದ ಸರ್ಕಾರಿ ಶಾಲೆ ಮತ್ತು ಕಾಲೇಜು ಹಾಗೂ ಶೇ.80ಕ್ಕಿಂತ ಹೆಚ್ಚು ಅಂಕ ಪಡೆದಿರುವ ಖಾಸಗಿ ಶಾಲೆ, ಕಾಲೇಜು ವಿದ್ಯಾರ್ಥಿಗಳಿಗೆ, ಕನ್ನಡ ಅಥವಾ ಇಂಗ್ಲಿಷ್ ಸೇರಿದಂತೆ ಯಾವುದೇ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು ಎಂದರು.

ಅಕ್ಷರ ಪುರಸ್ಕಾರಕ್ಕೆ ಸಂಬಂಧಿಸಿದ ಅರ್ಜಿಗಳು ಅಕ್ಷರ ಬುಕ್ ಹೌಸ್, ಅಕ್ಷರ ಅಕಾಡೆಮಿ ಮತ್ತು ಬಟ್ಟೆ ಅಂಗಡಿ2 ಇಲ್ಲಿ ದೊರೆಯಲಿದ್ದು, ಅರ್ಜಿ ಸಲ್ಲಿಸಲು ಸೆ.30 ಕಡೆಯ ದಿನ ಎಂದರು.

ವಿದ್ಯಾರ್ಥಿಗಳು ಖುದ್ದಾಗಿ ಅರ್ಜಿ ಸಲ್ಲಿಸಬೇಕು. ಅರ್ಜಿಯೊಂದಿಗೆ ಶಾಲೆ ಅಥವಾ ಕಾಲೇಜಿನ ಮುಖ್ಯೋಪಾಧ್ಯಾಯರು/ಪ್ರಾಂಶುಪಾಲರ ಸಹಿ ಹೊಂದಿರುವ ಅಂಕಪಟ್ಟಿಯ ಪ್ರತಿ, ಆಧಾರ್ ಕಾರ್ಡ್‌ನ ಜೆರಾಕ್ಸ್ ಪ್ರತಿ ಹಾಗೂ ಒಂದು ಭಾವಚಿತ್ರ ಸಲ್ಲಿಸಬೇಕು. ಪುರಸ್ಕಾರ ಸ್ವೀಕರಿಸುವ ಸಂದರ್ಭದಲ್ಲಿ ವಿದ್ಯಾರ್ಥಿಗಳು ಬರಲು ಸಾಧ್ಯವಾಗದಿದ್ದರೆ ಅವರ ಪೋಷಕರು ಹಾಜರಾಗಿ ಪುರಸ್ಕಾರ ಪಡೆಯಬಹುದು ಎಂದರು. ಜಿಲ್ಲೆಯ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ ಗುರುತಿಸುವುದರ ಜೊತೆಗೆ ಪುಸ್ತಕ ಓದುವ ಅಭಿರುಚಿ ಮತ್ತು ಜ್ಞಾನಾರ್ಜನೆ ಮನೋಭಾವ ಬೆಳೆಸುವುದು ಅಕ್ಷರ ಪುರಸ್ಕಾರದ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಅದೇ ದಿನ ಸರ್ಕಾರಿ ಮತ್ತು ಖಾಸಗಿ ಶಾಲೆಯ ತಲಾ ಐವರು ಎಲೆಮರೆ ಕಾಯಿಯಂತೆ ಸೇವೆ ಸಲ್ಲಿಸುತ್ತಿರುವ ಅತ್ಯುತ್ತಮ ಶಿಕ್ಷಕರನ್ನು ಗುರುತಿಸಿ ಸನ್ಮಾನ ಮಾಡಲಾಗುವುದು. ಈ ಎಲ್ಲ ಕಾರ್ಯಕ್ರಮಗಳಿಗೆ ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಸಹಕಾರ ನೀಡುತ್ತಿದೆ ಎಂದು ತಿಳಿಸಿದರು.

# ನಮೋ ಸೇವಾ ಸಂಕಲ್ಪ ಅಭಿಯಾನ ಇಂದಿನಿಂದ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರಧಾನಿ ನರೇಂದ್ರ ಮೋದಿ ಅವರ ಸಾರ್ವಜನಿಕ ಸೇವೆ ಮತ್ತು ಸಮರ್ಪಣೆಯ 25 ವರ್ಷಗಳ ಸ್ಮರಣಾರ್ಥ ಜಿಲ್ಲಾ ಬಿಜೆಪಿ ವತಿಯಿಂದಲೂ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿದ್ದೇಶ್‌ನಾಗೇಂದ್ರ ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಇಂದು ಸಂಜೆ ನಗರದ ಸಿದ್ದೇಶ್ವರಸ್ವಾಮಿ ದೇವಾಲಯ ಆವರಣದಲ್ಲಿ ಆಶೀರ್ವಾದ ದೀಪ ಹಮ್ಮಿಕೊಳ್ಳಲಾಗಿದೆ ಎಂದರು. ಪ್ರತಿ ಬೂತ್‌ನಲ್ಲಿ ಪ್ರತಿಯೊಂದು ಕುಟುಂಬವೂ ದೀಪ ಬೆಳಗಿಸುವ ಮೂಲಕ ಈ ಸಂಕಲ್ಪದಲ್ಲಿ ಭಾಗವಹಿಸಬೇಕು. ಪ್ರತಿ ದೀಪವೂ ನರೇಂದ್ರ ಮೋದಿ ಅವರ 25 ವರ್ಷಗಳ ಜನಸೇವೆಗೆ ಕೃತಜ್ಞತೆಯ ಸಂಕೇತ ಎಂದರು. ಇದೇ ರೀತಿ 25 ಕೋಟಿ ಮಕ್ಕಳ ಕನಸಿನ ಭಾರತ ಅಂಗವಾಗಿ ರಾಷ್ಟ್ರವ್ಯಾಪಿ ಚಿತ್ರಕಲೆ ಮತ್ತು ಭಾಷಣಸ್ಪರ್ಧೆ, ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ ಮೋದಿ ಅವರ ಸೇವಾ ಕಾರ್ಯ ಹಾಗೂ ವಿಕಸಿತ ಭಾರತ-2047 ರ ದೃಷ್ಟಿಕೋನ ಕುರಿತು ಮಾಹಿತಿ ನೀಡಲಾಗುವುದು ಎಂದರು.

ಇದೇ ವಿಷಯಗಳ ಕುರಿತು ವಿದ್ಯಾರ್ಥಿಗಳಿಗೆ ಭಾಷಣ ಸ್ಪರ್ಧೆ ಆಯೋಜಿಸುವುದು, ಅ. 2 ರಂದು ವಿವಿಧ ಸ್ಥಳಗಳಲ್ಲಿ ನಮೋ ಸೇವಾ ಕಥನ ಬೀದಿ ನಾಟಕ ಪ್ರದರ್ಶನವನ್ನೂ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಸೆ.25 ರಿಂದ ಅ.7 ರ ವರೆಗೆ ಅಂಗಳದ ಉತ್ಸವ ಕಾರ್ಯಕ್ರಮ ನಡೆಸಲು ಉದ್ದೇಶಿಸಲಾಗಿದೆ. ಮುಂದುವರಿದು ಮೋದಿ ಸರ್ಕಾರದ ಯೋಜನೆಗಳಿಂದ ಬದಲಾವಣೆಯಾದವರ ಕಥೆ, ವಿಕಸಿತ ಭಾರತ ಸಂಕಲ್ಪ ಯಾತ್ರೆ, ಸೇವಾ ಜ್ಯೋತಿ ಯಾತ್ರೆ, ವಡ್ ನಗರದಿಂದ ವಾರಣಾಸಿಗೆ ಜಲ, ಜನ ಮತ್ತು ಸೇವಾ ಸಂಕಲ್ಪಯಾತ್ರೆ, ಒಂದು ತಿಂಗಳ ಕಾಲ ಸೇವೆ ನನ್ನ ಯೋಗದಾನ ಕಾರ್ಯಕ್ರಮಗಳ ಜೊತೆಗೆ ರಕ್ತದಾನ ಶಿಬಿರ, ಅನಾಥಾಶ್ರಮ/ವೃದ್ಧಾಶ್ರಮ ಭೇಟಿ, ವೃಕ್ಷಾರೋಪಣ, ಸ್ವಚ್ಚತಾ ಕಾರ್ಯಕ್ರಮ, ಆರೋಗ್ಯ ತಪಾಸಣಾ ಶಿಬಿ, ಒಂದು ಗ್ರಾಮ ದತ್ತು ಸೇವಾ ಕಾರ್ಯ, ಪ್ಲಾಸ್ಟಿಕ್ ಮುಕ್ತ ಜಾಗೃತಿ, ಮಹಿಳಾ ಆರೋಗ್ಯ ಮತ್ತು ಸ್ವಚ್ಚತೆ, ಹಿಂದುಳಿದ ಮಕ್ಕಳಿಗೆ ಶೈಕ್ಷಣಿಕ ಸಹಾಯ, ಹಿರಿಯರಿಗೆ ಡಿಜಿಟಲ್ ಸಾಕ್ಷತೆ ಅಂಗಾಂಗ ದಾನದ ಸಂಕಲ್ಪ, ಪೌಷ್ಟಿಕತೆ ಮತ್ತು ರಕ್ತ ಹೀನತೆ ಜಾಗೃತಿ ಸೇರಿದಂತೆ 25 ಸೇವಾ ಚಟುವಟಿಕೆ ಹಮ್ಮಿಕೊಳ್ಳಲಾಗುವುದು ಎಂದು ವಿವರಿಸಿದರು.

ಈ ಎಲ್ಲ ಕಾರ್ಯಕ್ರಮಗಳು ಇಂದಿನಿಂದಲೇ ಆರಂಭವಾಗಿದ್ದು, ಶಾಲೆ, ಕಾಲೇಜು, ಜಿಲ್ಲಾಮಟ್ಟ ಹಾಗೂ ಎಲ್ಲ ಬೂತ್‌ಮಟ್ಟದಲ್ಲಿ ನಿರಂತರವಾಗಿ ನಡೆಯಲಿವೆ ಎಂದು ವಿವರಿಸಿದರು.

# ಬೇಲೂರು-ಆಲೂರು ಬರಪಟ್ಟಿಗೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಆಲೂರು, ಬೇಲೂರು ಸೇರಿ ರಾಜ್ಯದ ಮತ್ತೆ 53 ತಾಲೂಕುಗಳು ಬರಪೀಡಿತ ಪಟ್ಟಿಗೆ ಸೇರ್ಪಡೆಯಾಗಿದ್ದು, ಬೆಳೆ ಹಾನಿ ವಾಸ್ತವ ಸಮೀಕ್ಷೆಗೆ ಸರ್ಕಾರ ಆದೇಶ ಮಾಡಿದೆ.

ಬೇಲೂರು (ತೀವ್ರ) ಮತ್ತು ಆಲೂರು (ಸಾಧಾರಣ) ತಾಲೂಕುಗಳ ಬರಪೀಡಿತ ಪಟ್ಟಿಗೆ ಸೇರ್ಪಡೆ ಆಗಿದೆ.

ರಾಜ್ಯದ 17 ಜಿಲ್ಲೆಗಳ ಒಟ್ಟು 53 ತಾಲೂಕುಗಳಲ್ಲಿ ಗ್ರೌಂಡ್ ಟ್ರೂಥಿಂಗ್ ಸಮೀಕ್ಷೆ ನಡೆಸಲು ಕಂದಾಯ ಇಲಾಖೆ ಸೂಚನೆ ನೀಡಲಾಗಿದೆ. ಸೆಪ್ಟೆಂಬರ್ 19 ರಿಂದ 20 ರವರೆಗೆ ಜಮೀನುಗಳಲ್ಲಿ ವಾಸ್ತವಿಕ ಪರಿಶೀಲನೆ ನಡೆಸಿ 21ಕ್ಕೆ ಅಂತಿಮ ವರದಿ ಸಲ್ಲಿಕೆಗೆ ಸೂಚಿಸಲಾಗಿದೆ.

ಇದರಿಂದ ಜಿಲ್ಲೆಯ ರೈತರ ದೀರ್ಘಕಾಲದ ಬೇಡಿಕೆಗೆ ಸರ್ಕಾರ ಮನ್ನಣೆ ನೀಡಿದೆ. ಬೇಲೂರು ತಾಲೂಕನ್ನು ಬರಪೀಡಿತ ಎಂದು ಘೋಷಣೆ ಮಾಡುವಂತೆ ಹಲವು ದಿನಗಳಿಂದ ನಿರಂತರ ಪ್ರತಿಭಟನೆ ನಡೆಯುತ್ತಿದ್ದವು. ಇಂದು ಬೇಲೂರು ಬಂದ್‌ಗೂ ಕರೆ ನೀಡಲಾಗಿತ್ತು. ಪುಷ್ಪಗಿರಿ ಮಹಾ ಸಂಸ್ಥಾನ ಮಠದ ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಅವರ ನೇತೃತ್ವದಲ್ಲಿ ಹಾಲಿ ಹಾಗೂ ಮಾಜಿ ಶಾಸಕರು, ರೈತ ಹಾಗೂ ಕನ್ನಡಪರ ಸಂಘಟನೆಗಳವರು ಬಂದ್‌ಗೆ ಬೆಂಬಲ ನೀಡಿದ್ದರು.

ಇದೀಗ ನಿರಂತರ ಹೋರಾಟಕ್ಕೆ ಮನ್ನಣೆ ಸಿಕ್ಕಂತಾಗಿದೆ. ಆದರೆ ಬೇಲೂರನ್ನು ಬರಪಟ್ಟಿಗೆ ಸೇರಿಸಿರುವ ಲಾಭಾಂಶ ಪಡೆಯಲು ಮಾಜಿ ಸಚಿವ ಬಿ.ಶಿವರಾಂ ಮತ್ತು ಹಾಲಿ ಶಾಸಕ ಹೆಚ್.ಕೆ.ಸುರೇಶ್ ಅವರು ಮತ್ತೊಮ್ಮೆ ಜಿದ್ದಾಜಿದ್ದಿಗೆ ಬೀಳುವ ಸಾಧ್ಯತೆ ಇದೆ.

ಈ ಹಿಂದೆ ಜಿಲ್ಲೆಯ ಹಾಸನ, ಹೊಳೆನರಸೀಪುರ, ಚನ್ನರಾಯಪಟ್ಟಣ, ಅರಕಲಗೂಡು ಮತ್ತು ಅರಸೀಕೆರೆ ತಾಲೂಕುಗಳನ್ನು ಬರಪಟ್ಟಿಗೆ ಸೇರಿಸಲಾಗಿತ್ತು. ಇದೀಗ ಎರಡು ತಾಲೂಕು ಸೇರಿದ್ದು, ಸಕಲೇಶಪುರ ತಾಲೂಕು ಮಾತ್ರ ಬರ ಪಟ್ಟಿಯಿಂದ ಹೊರಗುಳಿದಿದೆ.

# ಉಚಿತ ಎಲ್.ಎಲ್.ಆರ್. ತರಬೇತಿ ನೀಡಲು ಅಭಿಯಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ರಸ್ತೆ ಅಪಘಾತಗಳನ್ನು ತಡೆಗಟ್ಟುವಲ್ಲಿ ರಸ್ತೆ ಸುರಕ್ಷತಾ ನಿಯಮಗಳ ಅರಿವು ಮತ್ತು ಚಾಲಕರಿಗೆ ಸೂಕ್ತ ತರಬೇತಿ ಅತ್ಯಂತ ಪ್ರಮುಖವಾಗಿದ್ದು, ಈ ನಿಟ್ಟಿನಲ್ಲಿ ಹಾಸನ ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳಲ್ಲಿ ಸಂಪೂರ್ಣ ಉಚಿತ ಎಲ್.ಎಲ್.ಆರ್. ತರಬೇತಿ ನೀಡಲು ಅಭಿಯಾನ ರಸ್ತೆ ಸುರಕ್ಷತಾ ಟ್ರಸ್ಟ್ ಮುಂದಾಗಿದೆ ಎಂದು ಸಂಸ್ಥೆಯ ಮುಖ್ಯ ಟ್ರಸ್ಟಿ ಎನ್.ಆರ್.ಕುಮಾರ್ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2025ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟು 43,159 ರಸ್ತೆ ಅಪಘಾತಗಳು ಸಂಭವಿಸಿದ್ದು, ಈ ಪೈಕಿ 11,408 ಮಾರಣಾಂತಿಕ ಹಾಗೂ 31,751 ಮಾರಣಾಂತಿಕವಲ್ಲದ ಅಪಘಾತಗಳಾಗಿವೆ. ಸರಾಸರಿ ಪ್ರತಿದಿನ 31ಕ್ಕೂ ಹೆಚ್ಚು ಮಂದಿ ರಸ್ತೆ ಅಪಘಾತಗಳಲ್ಲಿ ಜೀವ ಕಳೆದುಕೊಂಡಿದ್ದಾರೆ. ಪ್ರತಿಯೊಂದು ಅಪಘಾತದ ಹಿಂದೆ ಒಂದು ಕುಟುಂಬದ ನೋವು, ಚಿಕಿತ್ಸೆ ವೆಚ್ಚ, ಆರ್ಥಿಕ ನಷ್ಟ ಹಾಗೂ ಬದುಕಿನ ಮೇಲಿನ ಪರಿಣಾಮ ಅಡಗಿದೆ ಎಂದರು.



ಅಭಿಯಾನ ರಸ್ತೆ ಸುರಕ್ಷತಾ ಟ್ರಸ್ಟ್ ಈಗಾಗಲೇ ಹಲವು ಶಾಲಾ-ಕಾಲೇಜುಗಳಲ್ಲಿ ರಸ್ತೆ ಸುರಕ್ಷತೆ ಹಾಗೂ ಸಂಚಾರ ನಿಯಮಗಳ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿದ್ದು, ರಸ್ತೆ ಚಿಹ್ನೆಗಳು, ಸಂಚಾರ ನಿಯಮಗಳು, ಹೆಲ್ಮೆಟ್ ಮತ್ತು ಸೀಟ್‌ಬೆಲ್ಟ್ ಬಳಕೆ, ವೇಗ ನಿಯಂತ್ರಣ, ವಾಹನ ಚಲಾಯಿಸುವಾಗ ಮೊಬೈಲ್ ಬಳಕೆಯಿಂದಾಗುವ ಅಪಾಯ ಹಾಗೂ ಜವಾಬ್ದಾರಿಯುತ ರಸ್ತೆ ಬಳಕೆ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತಿದೆ.

ಎಲ್.ಎಲ್.ಆರ್. ಪಡೆಯಲು ಬಯಸುವ ಅಭ್ಯರ್ಥಿಗಳಿಗೆ ಯಾವುದೇ ಶುಲ್ಕವಿಲ್ಲದೆ ಉಚಿತ ತರಬೇತಿ ನೀಡಲಾಗುತ್ತಿದೆ. ಶ್ರವಣಬೆಳಗೊಳದಲ್ಲಿರುವ ಟ್ರಸ್ಟ್‌ನ ಶಾಖಾ ಕಚೇರಿಯಲ್ಲಿ ಆನ್ಲೈನ್ ಮೂಲಕ ಅಭ್ಯರ್ಥಿಗಳಿಗೆ ಪರೀಕ್ಷಾ ಸಿದ್ಧತೆಗೆ ತರಬೇತಿ ನೀಡಲಾಗುತ್ತಿದೆ. ತರಬೇತಿಯಲ್ಲಿ ಸಂಚಾರ ನಿಯಮಗಳು, ರಸ್ತೆ ಚಿಹ್ನೆಗಳು ಮತ್ತು ಸುರಕ್ಷಿತ ಚಾಲನಾ ವಿಧಾನಗಳು, ಪರೀಕ್ಷೆಯ ಪ್ರಶ್ನೋತ್ತರಗಳು, ಕಂಪ್ಯೂಟರ್ ಮೂಲಕ ಚಾಲನಾ ಪರವಾನಗಿ ಪಡೆಯುವ ಕಾನೂನುಬದ್ಧ ಪ್ರಕ್ರಿಯೆ ಕುರಿತು ಮಾರ್ಗದರ್ಶನ ನೀಡಲಾಗುತ್ತದೆ.

ಮಧ್ಯವರ್ತಿಗಳ ಅವಲಂಬನೆಯಿಲ್ಲದೆ ಸ್ವಂತ ಜ್ಞಾನ ಮತ್ತು ಅರ್ಹತೆಯ ಆಧಾರದ ಮೇಲೆ ಪರವಾನಗಿ ಪಡೆಯುವಂತೆ ಅಭ್ಯರ್ಥಿಗಳನ್ನು ಪ್ರೋತ್ಸಾಹಿಸುತ್ತಿದೆ. ರಸ್ತೆ ನಿಯಮಗಳ ಜ್ಞಾನವು ಚಾಲನಾ ಜೀವನದುದ್ದಕ್ಕೂ ನೆರವಾಗಲಿದ್ದು, ಅಪಘಾತಗಳನ್ನು ತಪ್ಪಿಸುವಲ್ಲಿ ಸಹಕಾರಿಯಾಗಲಿದೆ ಎಂಬುದು ಟ್ರಸ್ಟ್‌ನ ಆಶಯವಾಗಿದೆ ಎಂದರು.

ಹಾಸನ ಜಿಲ್ಲೆಯ ಪ್ರತಿಯೊಂದು ತಾಲೂಕು ಕೇಂದ್ರದಲ್ಲೂ ಹಂತ ಹಂತವಾಗಿ ಉಚಿತ ಎಲ್.ಎಲ್.ಆರ್. ತರಬೇತಿ ಹಾಗೂ ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮ ನಡೆಸಲು ಉದ್ದೇಶಿಸಲಾಗಿದ್ದು, ಆಯಾ ತಾಲೂಕಿನಲ್ಲಿ ತರಬೇತಿ ಪಡೆಯಲು ಆಸಕ್ತರು ಟ್ರಸ್ಟ್‌ನ ಅಧಿಕೃತ ಕಚೇರಿ ಸಂಖ್ಯೆ 9686051501

ಗೆ ಕರೆ ಮಾಡಿ ಹೆಸರು ನೋಂದಾಯಿಸಿಕೊಳ್ಳಬಹುದು.

''ಅಪಘಾತ ತಡೆಯೋಣ ? ಜೀವ ಉಳಿಸೋಣ ? ಕುಟುಂಬದ ಕಣ್ಣೀರು ತಪ್ಪಿಸೋಣ'' ಎಂಬ ಆಶಯದೊಂದಿಗೆ ರಸ್ತೆ ಸುರಕ್ಷತಾ ಸೇವೆಯಲ್ಲಿ ಸಾರ್ವಜನಿಕರು ತಮ್ಮ ಸಮಯ, ಜ್ಞಾನ, ಅನುಭವ, ಸಲಹೆ ಅಥವಾ ಸ್ವಯಂಸೇವೆಯ ಮೂಲಕವೂ ಕೈಜೋಡಿಸಬಹುದು ಎಂದು ಟ್ರಸ್ಟ್ ಮನವಿ ಮಾಡುತ್ತದೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ತರಬೇತುದಾರರಾದ ಭೂಮಿಕಾ ಇದ್ದರು.

# ದಾಖಲೆ ಇದ್ರೆ ಬಿಡುಗಡೆ ಮಾಡಿ: ಸಚಿವ ಎನ್‌ಸಿಎಸ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ನಾನು ಬಿಡುಗಡೆ ಮಾಡುವ ದಾಖಲೆಗಳಿಂದ ದೇಶವೇ ಅಲ್ಲೋಲ ಕಲ್ಲೋಲ ಆಗಲಿದೆ, ಸರ್ಕಾರವೇ ಅಲುಗಾಡಲಿದೆ ಎಂಬ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ಹೇಳಿಕೆಗೆ ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಮಾರ್ಮಿಕವಾಗಿಯೇ ತಿರುಗೇಟು ನೀಡಿದ್ದಾರೆ.



ತಾಲೂಕಿನ ಐದಳ್ಳಕಾವಲ್‌ನಲ್ಲಿ ಎತ್ತಿನಹೊಳೆ ಯೋಜನೆ ಕಾಮಗಾರಿ ವೀಕ್ಷಣೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಧ್ಯಮದವರು ಪದೇ ಪದೇ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆಯೇ ಪ್ರಶ್ನಿಸುತ್ತಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು.

ಈ ಕುರಿತು ಕೇಳಿ ಎಂದು ನಿಮಗೇನಾದರೂ ಟಾಸ್ಕ್ ಕೊಟ್ಟಿದ್ದಾರಾ ಎಂದು ಪ್ರಶ್ನೆ ಹಾಕಿದ ಸಚಿವರು, ಶಿವಲಿಂಗೇಗೌಡರೋ, ನಾನೋ ಅಥವಾ ಇನ್ನೊಬ್ಬರೋ ಹೇಳಿಕೆ ನೀಡಿದರೆ ಪದೇ ಪದೇ ಕೇಳುತ್ತೀರಾ, ಅವತ್ತೇ ಕೇಳಿ ಅಲ್ಲೇ ಬಿಟ್ಟು ಬಿಡುತ್ತೀರಿ. ಆದರೆ ಕುಮಾರಸ್ವಾಮಿ ಅವರ ಮೇಲೆ ಅಷ್ಟೊಂದು ಪ್ರೀತಿ ಏಕೆ ಎಂದು ಕೇಳಿದರು.

ಹೇಳಿಕೆಗಳೆಲ್ಲ ಪೊಳ್ಳಾಗುತ್ತಿವೆ: 2023 ರಿಂದಲೂ ಕುಮಾರಸ್ವಾಮಿ ಅವರು ವಿವಿಧ ವಿಚಾರ ಕುರಿತು ಹೇಳಿಕೆ ನೀಡುತ್ತಲೇ ಬಂದಿದ್ದಾರೆ. ಪೆನ್‌ಡ್ರೈವ್ ವಿಚಾರ ಸೇರಿ ಹಲವು ಹೇಳಿಕೆ ನೀಡಿದ್ದಾರೆ. ಅವುಗಳಲ್ಲಿ ಎಷ್ಟು ಯಶಸ್ವಿಯಾಗಿವೆ ಎಂದು ಮರು ಪ್ರಶ್ನೆ ಹಾಕಿದರು.

ದೇಶವೇ ಅಲ್ಲೋಲ ಕಲ್ಲೋಲ ಆಗುತ್ತದೆ, ಸರ್ಕಾರವೇ ಅಲುಗಾಡುತ್ತದೆ ಎಂಬ ವಿಚಾರ ಇದ್ದರೆ ಯಾರಾದರೂ ಅಮೆರಿಕಾಕ್ಕೆ ಹೋಗುತ್ತಾರಾ, ಒಬ್ಬ ರಾಜಕಾರಣಿ, ಮಾಜಿ ಮುಖ್ಯಮಂತ್ರಿ ಹಾಗೂ ಪ್ರಧಾನ ಮಂತ್ರಿಯ ಮಗ, ಇಂತಹ ದೊಡ್ಡ ವಿಚಾರ ತಮ್ಮ ಬಳಿ ಇದ್ದಿದ್ದರೆ ವಿದೇಶಿ ಪ್ರವಾಸ ರದ್ದುಪಡಿಸಿ, ಇಲ್ಲಿಂದಲೇ ಹೇಳಿಕೆ ನೀಡುತ್ತಿರಲಿಲ್ಲವೇ ಎಂದರು.

ಅವರು ಅಮೆರಿಕಾಕ್ಕೆ ಏಕೆ ಹೋದರು, ಯಾವ ಕಾರಣಕ್ಕೆ ಆ ಹೇಳಿಕೆ ನೀಡಿದ್ದಾರೆ ಎಂಬುದು ಅವರ ಇತಿಹಾಸ ನೋಡಿದರೆ ತಿಳಿಯಲಿದೆ. ಅವರ ಹೇಳಿಕೆ ಎಲ್ಲವೂ ಪೊಳ್ಳಾಗುತ್ತಿವೆ. ನೀವು ಅದೇ ವಿಚಾರ ಮತ್ತೆ ಮತ್ತೆ ಕೇಳಿದಾಗ ನಮಗೇ ಮುಜುಗರವಾಗುತ್ತದೆ ಎಂದರು.

ಬಿಡುಗಡೆ ಮಾಡಲಿ: ಕುಮಾರಸ್ವಾಮಿ ಅವರ ಬಳಿ ದಾಖಲೆಗಳಿದ್ದರೆ ಬಿಡುಗಡೆ ಮಾಡಲು ಯಾರೂ ಅಡ್ಡಿಪಡಿಸಿಲ್ಲ ಎಂದ ಅವರು, ದಾಖಲೆ ಇದ್ದರೆ ಬಿಡುಗಡೆ ಮಾಡಲಿ, ಬೇಡ ಎಂದು ಯಾರಾದರೂ ಹಿಡಿದುಕೊಂಡಿದ್ದಾರೆಯೇ, ನಾವೇನಾದರೂ ಸ್ಟೇ ತಂದಿದ್ದೇವೆಯೇ, ಸರ್ಕಾರದಿಂದ ಏನಾದರೂ ಸ್ಟೇ ತಂದಿದ್ದೇವೆಯೇ, ಯಾರಾದರೂ ದಾಖಲೆ ಬಿಡಬೇಡಿ ಎಂದು ಹೇಳಿದ್ದಾರೆ ಎಂದು ಸರಣಿ ಪ್ರಶ್ನೆ ಹಾಕಿದರು.

ನಾನು ಯಾವತ್ತೂ ಮಾಧ್ಯಮದವರು ಯಾರ ಪರವಾಗಿಯೂ ಇರಬೇಕು ಎಂದು ಹೇಳುವುದಿಲ್ಲ. ಆದರೆ ನಮ್ಮ ಬಗ್ಗೆಯೂ ಸ್ವಲ್ಪ ಪ್ರೀತಿ ಇಟ್ಟುಕೊಳ್ಳಿ ಎಂದು ಹೇಳುತ್ತಿದ್ದೇನೆ.

ಕುಮಾರಸ್ವಾಮಿ ಅವರ ಬಗ್ಗೆ ಹೆಚ್ಚು ಪ್ರೀತಿ ಇಟ್ಟುಕೊಳ್ಳಿ, ಆದರೆ ನಮ್ಮನ್ನೂ ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಬೇಡಿ ಎಂದರು.

ಈ ವಿಚಾರ ಮತ್ತೆ ಪುನರಾವರ್ತಿಸಬೇಡಿ. ಮಾಧ್ಯಮದವರು ಇದೇ ವಿಚಾರವನ್ನು ಪದೇಪದೇ ಕೇಳುತ್ತಿರುವುದಕ್ಕೆ ಬೇಸರ ವ್ಯಕ್ತಪಡಿಸಿದ ಅವರು, ನೋಡಿ, ಕೈ ಮುಗಿದು ಕೇಳುತ್ತೇನೆ. ಈ ವಿಚಾರವನ್ನು ಮತ್ತೆ ಮತ್ತೆ ರಿಪೀಟ್ ಮಾಡಬೇಡಿ ಎಂದು ಮನವಿ ಮಾಡಿದರು.

ಇದಕ್ಕೂ ಮುನ್ನ ಎತ್ತಿನಹೊಳೆ ಕಾಮಗಾರಿ ವೀಕ್ಷಣೆ ಮಾಡಿದ ಸಚಿವರು, ಆದಷ್ಟು ಶೀಘ್ರ ಕಾಮಗಾರಿ ಮುಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಈ ವೇಳೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಂ.ಶಿವಲಿಂಗೇಗೌಡ, ಶಾಸಕ ಹೆಚ್.ಕೆ.ಸುರೇಶ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಮಾಜಿ ಎಂಎಲ್‌ಸಿ ಗೋಪಾಲಸ್ವಾಮಿ ಮೊದಲಾದವರಿದ್ದರು.

## ಶೀಘ್ರ ಎತ್ತಿನಹೊಳೆ ನೀರು: ವಿಶ್ವಾಸ

ನೂರು ದಿನದಲ್ಲಿ ತುಮಕೂರಿಗೆ ಎತ್ತಿನಹೊಳೆ ನೀರು ಹರಿಸುವ ಗುರಿಯಿದೆ. ಹಾಗಾಗಿ ಶೀಘ್ರದಲ್ಲೇ ತಾಲ್ಲೂಕಿನ ಜನತೆ ನದಿ ನೀರು ನೋಡಲಿದ್ದಾರೆ. ಕುಡಿಯುವ ನೀರೂ ಸಿಗಲಿದೆ. ಕೆರೆಗಳು ತುಂಬಲಿವೆ, ಅಂತರ್ಜಲ ವೃದ್ಧಿಸಿ ಕೊಳವೆ ಬಾವಿಗಳಲ್ಲಿ ನೀರು ಸಿಗಲಿದೆ ಎಂದು ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಆಶಾಭಾವ ವ್ಯಕ್ತಪಡಿಸಿದರು. ತಾಲ್ಲೂಕಿನ ತಳಲುತೊರೆಯಲ್ಲಿ ಎತ್ತಿನಹೊಳೆ ಯೋಜನೆ ಗುರುತ್ವ ಕಾಲುವೆ ಪ್ಯಾಕೇಜ್-8ರ ಕಾಮಗಾರಿ ಪರಿಶೀಲಿಸಿ ಮಾತನಾಡಿ, ಯಾವ ಕಾರಣಕ್ಕೂ ಕಾಮಗಾರಿ ವಿಳಂಬವಾಗಬಾರದು. ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ನದಿ ನೀರಿನ ಹರಿವಿಗೆ ಅವಕಾಶ ಮಾಡಿಕೊಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಸೆ.19 ರಂದು ಕಾನೂನು ಅರಿವು ನೆರವು ಕಾರ್ಯಾಗಾರ: ಶಾಂತಿದಿನಾಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಾಗರೀಕ ಹಕ್ಕುಗಳ ಸಂರಕ್ಷಣಾ ಸಂಘ ಜಿಲ್ಲಾ ಚಾಪ್ಟರ್ ಹಾಸನ, ಮೈಸೂರು, ಮಂಡ್ಯ, ರಾಮನಗರ, ಚಿಕ್ಕಮಗಳೂರು, ಕೊಡಗು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಿವಿಧ ಕಾನೂನು ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ಸೆ.19 ರಂದು ಕಾನೂನು ಅರಿವು ಮತ್ತು ನೆರವು ಕಾರ್ಯಾಗಾರ ಮತ್ತು ಅಂತಾರಾಷ್ಟ್ರೀಯ ಶಾಂತಿ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಚಾಪ್ಟರ್ ಜಿಲ್ಲಾಧ್ಯಕ್ಷ ಅಬ್ದುಲ್ ಹಮೀದ್ ತಿಳಿಸಿದರು.




ಇಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಅಂದು ಬೆಳಗ್ಗೆ 10.30 ಗಂಟೆಗೆ ನಗರದ ಎನ್.ಆರ್.ಸರ್ಕಲ್ ನಲ್ಲಿರುವ ಇಸ್ಲಾಮಿಕ್ ಸೆಂಟರ್‌ನಲ್ಲಿ ನಡೆಯುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೈಕೋರ್ಟ್‌ನ ಹಿರಿಯ ವಕೀಲ ಮುಹಮ್ಮದ್ ಅಕ್ಮಲ್ ರಜ್ವಿ ವಹಿಸಲಿದ್ದಾರೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಜಿ.ಕೆ. ಉದ್ಘಾಟನೆ ನೆರವೇರಿಸುವರು ಎಂದರು.

ಮುಖ್ಯ ಅತಿಥಿಗಳಾಗಿ ನಿವೃತ್ತ ಪ್ರಾಂಶುಪಾಳ ಡಾ.ಎಂ.ಬಿ.ಇರ್ಷಾದ್, ಎಂ.ಕೃಷ್ಣ ಕಾನೂನು ಕಾಲೇಜು ಪ್ರಾಂಶುಪಾಲ ಶ್ರೀನಿವಾಸ್ ಮತ್ತು ಎಪಿಸಿಆರ್ ಕರ್ನಾಟಕ ಸ್ಟೇಟ್ ಚಾಪ್ಟರ್ ಸಂಯೋಜಕ ಮೊಹಮ್ಮದ್ ಪೀರ್ ಆಗಮಿಸುವರು ಎಂದರು.

ಕಾನೂನು ಜಾಗೃತಿ, ಸಾಮಾನ್ಯ ಜನರಿಗೆ ತಮ್ಮ ನಾಗರಿಕ ಹಕ್ಕುಗಳ ಬಗ್ಗೆ ಶಿಕ್ಷಣ ನೀಡುವುದು, ದೌರ್ಜನ್ಯಕ್ಕೆ ಒಳಗಾದವರಿಗೆ, ದೀನ ದಲಿತರಿಗೆ ಉಚಿತ ಕಾನೂನು ನೆರವು ನೀಡುವುದು , ಸಂಕಷ್ಟದಲ್ಲಿರುವವರಿಗೆ ಮಾರ್ಗದರ್ಶನ ನೀಡಲು ಸಹಾಯವಾಣಿ ತೆರೆಯುವುದು ನಮ್ಮ ಶಾಖೆಯ ಉದ್ದೇಶ ಎಂದರು.

ಸೆ.21 ರ ಅಂತಾರಾಷ್ಟ್ರೀಯ ಶಾಂತಿ ದಿನದ ಹಿನ್ನೆಲೆಯಲ್ಲಿ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಕಾನೂನಿನ ಅರಿವು ಮೂಡಿಸುವುದು ನಮ್ಮ ಜವಾಬ್ದಾರಿ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಹಮ್ಮದ್ ಜಾನ್, ಮೊಹಮ್ಮದ್ ಪೀರ್, ಆಲೂರು ಬಾಬು, ಬುಡೇನ್ ಶರೀಫ್ ಮತ್ತು ಮಹಮ್ಮದ್ ಅಯಾನ್ ಇದ್ದರು.

# ಮೋದಿ ವಿರುದ್ಧ ಯುವ ಕಾಂಗ್ರೆಸ್ ಅಣಕು ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರಧಾನಿ ನರೇಂದ್ರ ಮೋದಿ ಅವರ ಹುಟ್ಟು ಹಬ್ಬದ ಅಂಗವಾಗಿ ಜಿಲ್ಲಾ ಯೂತ್ ಕಾಂಗ್ರೆಸ್ ಕಾರ್ಯಕರ್ತರು ನಗರದಲ್ಲಿಂದು ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿ ಮೋದಿ ಅವಧಿಯಲ್ಲಿ ಯಾವುದೇ ಅಭಿವೃದ್ಧಿ ಆಗಿಲ್ಲ ಎಂದು ದೂರಿದರು.



ದೇಶದ ಯುವಕರಿಗೆ ಉದ್ಯೋಗದ ಹೆಸರಿನಲ್ಲಿ ದ್ರೋಹ ಮಾಡಿದ್ದಾರೆ. ಇವರೊಬ್ಬ ಸುಳ್ಳುಗಾರ, ನಿರುದ್ಯೋಗ ಪಿತಾಮಹ ಪ್ರಧಾನಿ, ಅಂಧರ ಭಕ್ತ ಎಂದು ಟೀಕಿಸಿದರು. ಪದವಿಧರ ವಿದ್ಯಾರ್ಥಿ ಧಿರಿಸು ಧರಿಸಿ ಬಜ್ಜಿ ಬೇಯಿಸುವ ಮೂಲಕ ಅಣಕು ಪ್ರತಿಭಟನೆ ಮಾಡಿದರು.

ಮೋದಿ ಅವರು ಮೂರನೇ ಬಾರಿಗೆ ದೇಶದ ಪ್ರಧಾನಿ ಆಗಿದ್ದರೂ ನಿರುದ್ಯೋಗ ನಿವಾರಣೆ ಸೇರಿದಂತೆ ಯಾವುದೇ ಸಮಸ್ಯೆ ಬಗೆಹರಿಸಿಲ್ಲ. ಕೇವಲ ಭಾಷಣ ಮಾಡುವುದನ್ನು ಬಿಟ್ಟರೆ ಮತ್ತೇನನ್ನೂ ಮಾಡಿಲ್ಲ ಎಂದು ಕಿಡಿ ಕಾರಿದರು. ಜಿಲ್ಲಾ ಯೂತ್ ಕಾಂಗ್ರೆಸ್ ಹಾಗೂ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ರಂಜಿತ್ ಗೊರೂರು, ಮನು ಮೊದಲಾದವರು ವಿನೂತನ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

# ದೀಕ್ಷಾಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

**● ಭೀಮ ವಿಜಯ ನ್ಯೂಸ್**

ಹಾಸನ : ಡಾ. ಬಿ.ಆರ್. ಅಂಬೇಡ್ಕರ್ ಅವರ ಅನುಯಾಯಿಗಳಿಗೆ ಮಹಾರಾಷ್ಟ್ರದ ನಾಗಪುರದಲ್ಲಿರುವ ದೀಕ್ಷಾಭೂಮಿಗೆ ಯಾತ್ರೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಅರ್ಹ ಯಾತ್ರಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅ.19ರಿಂದ ಅ.22ರವರೆಗೆ ವಿವಿಧ ಜಿಲ್ಲೆಗಳಿಂದ ನಾಗಪುರಕ್ಕೆ ತೆರಳಿ ವಾಪಸ್ ಆಗುವ ಯಾತ್ರಾರ್ಥಿಗಳಿಗೆ ಬಸ್ ಹಾಗೂ ರೈಲು ಮೂಲಕ ಪ್ರಯಾಣದ ವ್ಯವಸ್ಥೆ ಕಲ್ಪಿಸಲಾಗುತ್ತಿದೆ.

ಯಾತ್ರೆಯಲ್ಲಿ ಭಾಗವಹಿಸಲು ಇಚ್ಛಿಸುವ ಅರ್ಹರು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಕೆ ಸೆ.19ರಿಂದ ಆರಂಭವಾಗಲಿದ್ದು, ಅ.9 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಬಳಿಕ ಅಗತ್ಯ ದಾಖಲಾತಿಗಳನ್ನು ಹಾಸನದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಸದನ ಸಮಿತಿ ವರದಿ ಜಾರಿಗೆ KAMS ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆ ಸೇರಿದಂತೆ ರಾಜ್ಯದ ಅನುದಾನರಹಿತ ಖಾಸಗಿ ಶಾಲೆಗಳು ಹಲವು ವರ್ಷಗಳಿಂದ ಎದುರಿಸುತ್ತಿರುವ ವಿವಿಧ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ರಚಿಸಲಾಗಿರುವ ವಿಶೇಷ ಸದನ ಸಮಿತಿ ಸರ್ಕಾರಕ್ಕೆ ಸಲ್ಲಿಸಿರುವ ಮಧ್ಯಂತರ ವರದಿಯನ್ನು ಶಿಕ್ಷಣ ಇಲಾಖೆ ಕೂಡಲೇ ಜಾರಿಗೊಳಿಸಬೇಕು ಎಂದು ಹಾಸನ ಜಿಲ್ಲಾ ಅನುದಾನರಹಿತ ಶಾಲೆಗಳ ಆಡಳಿತ ಮಂಡಳಿಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಬಿ.ಈ.ಶಿವರಾಮೇಗೌಡ ಒತ್ತಾಯಿಸಿದರು.




ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವರದಿಯಲ್ಲಿ ಪ್ರಸ್ತಾಪ ಮಾಡಿರುವ ಎಲ್ಲ ವಿಷಯಗಳನ್ನು ಪರಿಶೀಲಿಸಿ ತಕ್ಷಣ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ಖಾಸಗಿ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿಯಲು, ಶಿಕ್ಷಣ ಸಚಿವರ ಸೂಚನೆ ಮೇರೆಗೆ ವಿಧಾನ ಪರಿಷತ್ ಸದಸ್ಯ ಹಾಗೂ KAMS ಗೌರವಾಧ್ಯಕ್ಷ ಪುಟ್ಟಣ್ಣ ಅವರ ಅಧ್ಯಕ್ಷತೆಯಲ್ಲಿ ವಿಶೇಷ ಸದನ ಸಮಿತಿ ರಚಿಸಲಾಗಿತ್ತು. ಸಮಿತಿಯು ನಮ್ಮ ಸಮಸ್ಯೆ ಅಧ್ಯಯನ ಮಾಡಿ ಮಧ್ಯಂತರ ವರದಿ ಸಲ್ಲಿಸಿದ್ದು, ಈ ವಿಷಯದಲ್ಲಿ 2017 - 18ಕ್ಕೂ ಮುಂಚೆ ಸ್ಥಾಪನೆಯಾದ ಶಾಲೆಗಳು ಹಾಗೂ ಹೊಸ ಶಾಲೆಗಳ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಹಲವು ನಿಯಮ ಸರಳೀಕರಿಸುವ ಕುರಿತು ಸಮಿತಿ ಶಿಫಾರಸು ಮಾಡಿದೆ ಎಂದರು.

ಅಗ್ನಿ ಸುರಕ್ಷತೆ ಮತ್ತು ಕಟ್ಟಡ ಸುರಕ್ಷತೆ, ಭೂ ಪರಿವರ್ತನೆ, ಕಟ್ಟಡ ನಕ್ಷೆ ಅನುಮೋದನೆ, 30 ವರ್ಷದ ನೋಂದಣಿ ಪತ್ರದ ಅಗತ್ಯತೆ, ಹಳೆಯ ಶಾಲೆಗಳಿಗೆ ವಿಧಿಸಲಾಗುತ್ತಿರುವ 3 ಲಕ್ಷ ಠೇವಣಿ, ಮೂಲಸೌಕರ್ಯ ಮಾನದಂಡಗಳು, ಒಂದೇ ಆವರಣದಲ್ಲಿ ಕಾರ್ಯನಿರ್ವಹಿಸುವ ಶಿಕ್ಷಣ ಸಂಸ್ಥೆಗಳು, ಖಾಸಗಿ ಅನುದಾನಿತ ಶಿಕ್ಷಕರ ವೇತನ, ಆರ್‌ಟಿಇ ಮರುಪಾವತಿ, ಶಾಲೆಗಳ ಸ್ಥಳಾಂತರ ಹಾಗೂ ಹಸ್ತಾಂತರ ಸೇರಿದಂತೆ ಹಲವು ವಿಚಾರ ಗಳನ್ನು ಸಮಿತಿ ಪರಿಶೀಲಿಸಿದೆ ಎಂದು ಹೇಳಿದರು.

ಇದಕ್ಕೆಲ್ಲ KAMS ವತಿಯಿಂದ ನ್ಯಾಯಾಲಯದ ಮೊರೆ ಹೋಗಲಾಗಿತ್ತು. ನಮ್ಮ ಮನವಿಗೆ ಸ್ಪಂದಿಸಿ ನ್ಯಾಯಾಲಯ ತೀರ್ಪಿನ ಮೂಲಕ ನಿರ್ದೇಶನ ನೀಡಿದ ನಂತರ ಅದನ್ನು ಪರಿಗಣಿಸಿ, ಹಳೆಯ ಶಾಲೆಗಳ ಮೇಲೆ ಹೊಸ ನಿಯಮಗಳನ್ನು ಅನ್ವಯಿಸುವ ವಿಚಾರದಲ್ಲೂ ಸ್ಪಷ್ಟತೆ ತರಲಾಗಿದೆ ಎಂದು ಶಿವರಾಮೇಗೌಡ ಹೇಳಿದರು.

ಈ ವರದಿಯನ್ನು ಶಿಕ್ಷಣ ಸಚಿವರು ಅಂಗೀಕರಿಸಿರುವ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ಆದೇಶಗಳು ಹೊರಬರಬೇಕಿದ್ದು, ಶಿಕ್ಷಣ ಇಲಾಖೆ ಯಾವುದೇ ವಿಳಂಬ ಮಾಡದೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಲ್ಲದೆ ಶಿಕ್ಷಕರ ದಿನಾಚರಣೆ ವೇಳೆ ರಾಜ್ಯದ ಎಲ್ಲ ಶಿಕ್ಷಕರನ್ನು ಅವರ ಹೆಸರಿನ ಮುಂದೆ ಗೌರವಪೂರ್ವಕವಾಗಿ TR ಎಂದು ಸಂಬೋಧಿಸುವ ಕ್ರಮ ಜಾರಿಗೆ ತಂದಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ಧನ್ಯವಾದ ಹೇಳಿದರು.

ಇದೇ ವೇಳೆ ಗ್ರಾಮೀಣ ವಿದ್ಯಾರ್ಥಿಗಳ ಶೇ.15 ಮೀಸಲಾತಿ ವಿಭಜನೆ ಮಾಡದೇ ಹಾಗೆಯೇ ಮುಂದುವರಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾರ್ಯದರ್ಶಿ ಟೈಮ್ಸ್ ಗಂಗಾಧರ್, ಕಾರ್ಯ ನಿರ್ವಾಹಕ ನಿರ್ದೇಶಕ ಪವನ್ ಮಂಜೇಗೌಡ, ನಟರಾಜ್ ಇದ್ದರು.

## ಶಿಕ್ಷಕರ ದಿನಾಚರಣೆ-ಪ್ರಶಸ್ತಿ ಪ್ರದಾನ

ನಮ್ಮ ಶಾಲಾ ಒಕ್ಕೂಟದ ವತಿಯಿಂದ ಪ್ರತಿವರ್ಷದಂತೆ ಈ ಬಾರಿಯೂ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿಗೆ ಜಿಲ್ಲಾಡಳಿತ ನೀಡುವ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳ ಸೇವೆ ಗುರುತಿಸಿ ಸಂಘದಿಂದ ನೀಡಲಾಗುವ ಪ್ರತಿಷ್ಠಿತ ವಿದ್ಯಾಪ್ರೇರಣ ಪುರಸ್ಕಾರ, ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ಜಿಲ್ಲೆಯ ಎಲ್ಲ ಪಠ್ಯಕ್ರಮದ ವಿದ್ಯಾರ್ಥಿಗಳಿಗೆ ಸೆ. 19 ರಂದು ಪ್ರಶಸ್ತಿ ಪ್ರದಾನ ಹಾಗೂ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಬೆಳಿಗ್ಗೆ 10 ಗಂಟೆಗೆ ನಗರದ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದರು.

# ಜನಪದ ಗ್ರಾಮೀಣ ಜನರ ಜೀವನಾಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು : ಜಾನಪದ ಸಂಗೀತವು ಗ್ರಾಮೀಣ ಪ್ರದೇಶದ ಜೀವನಾಡಿಯಾಗಿದೆ. ಸಂಗೀತವು ಮನಸ್ಸಿಗೆ ದಿವ್ಯ ಔಷಧಿಯಾಗಿದೆ. ಅದರಲ್ಲಿ ಜಾನಪದ ಹಾಡುಗಳು ನಮ್ಮ ಸಾಂಸ್ಕೃತಿಕ ಪರಂಪರೆ ಬಿಂಬಿಸುವ ಧ್ವನಿಯಾಗಿವೆ ಎಂದು ಶ್ರೀ ಸಂಸ್ಥಾನ ಹಿರೇಮಠದ ಪೀಠಾಧ್ಯಕ್ಷರಾದ ಶ್ರೀ ಸದಾಶಿವ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.




ತಾಲೂಕಿನ ಪಾಳ್ಯ ಹೋಬಳಿ ಕಾರ್ಜುವಳ್ಳಿಯ ಶ್ರೀಮದ್ ರಂಭಾಪುರಿ ವೀರ ಸಿಂಹಾಸನ ಶಾಖಾ ಶ್ರೀ ಸಂಸ್ಥಾನ ಹಿರೇಮಠದಲ್ಲಿ ಕರ್ನಾಟಕ ಜಾನಪದ ಪರಿಷತ್ ಬೆಂಗಳೂರು ಜಿಲ್ಲಾ ಜಾನಪದ ಪರಿಷತ್ ಹಾಸನ ತಾಲೂಕು ಘಟಕ ಆಲೂರು ಹಾಗು ಲಯನ್ಸ್ ಸೇವಾ ಸಂಸ್ಥೆ ಆಲೂರು ಇವರ ಸಹಯೋಗದಲ್ಲಿ ಶಿಕ್ಷಕರ ದಿನಾಚರಣೆ, ಆದರ್ಶ ಶಿಕ್ಷಕರಿಗೆ ಗೌರವ ಸಮರ್ಪಣೆ ಮತ್ತು ಜಾನಪದ ಸಂಭ್ರಮ "ಹಳ್ಳಿಯ ಸೊಗಡು ಗುರುಗಳ ಬೆಡಗು" ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಭಜನೆ ಕೇವಲ ವಯಸ್ಸಾದ ಜನತೆಗೆ ಅಲ್ಲ. ಅದು ನಮ್ಮ ಬದುಕಿನ ತಾತ್ವಿಕ ಚಿತ್ರಣದ ಸಾರ ಅದನ್ನು ಭಜನೆಯ ಪದದಲ್ಲಿ ಕಾಣಬಹುದು. ಜಾನಪದ ಸಂಗೀತಕ್ಕೆ ವಯಸ್ಸು ಇಲ್ಲ. ಯಾರು ಬೇಕಾದರೂ ತಮಗೆ ಇಷ್ಟವಾದ ಸಂಗೀತ ಆಲಿಸಬಹುದಾಗಿದೆ ಎಂದರು. ನಮ್ಮ ಜಾನಪದ ಕಲೆ ಮತ್ತು ಸಂಸ್ಕೃತಿಗಳು ಗ್ರಾಮೀಣ ಪರಂಪರೆ ಸೊಗಡನ್ನು ಪ್ರತಿಬಿಂಬಿಸುತ್ತವೆ. ಸಾಹಿತ್ಯ ಮತ್ತು ಕಲೆಗಳ ಮೂಲ ಬೇರುಗಳು ಜಾನಪದದಲ್ಲಿವೆ. ಆದ್ದರಿಂದ ಯುವಕರು ಆಧುನಿಕ ಅಬ್ಬರಗಳಿಗೆ ಮಾರುಹೋಗದೆ ಜಾನಪದ ಸಂಸ್ಕೃತಿ ಉಳಿಸಿ ಬೆಳೆಸಲು ಶ್ರಮಿಸಬೇಕು ಎಂದರು.

ಹಾಸನ ಜಿಲ್ಲಾ ಜಾನಪದ ಪರಿಷತ್ ಅಧ್ಯಕ್ಷ ಹಂಪನಹಳ್ಳಿ ತಿಮ್ಮೇಗೌಡರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಒಬ್ಬ ವೈದ್ಯ ಕೆಟ್ಟರೆ ಒಬ್ಬ ರೋಗಿ ಮರಣ ಹೊಂದುತ್ತಾನೆ. ಒಬ್ಬ ಇಂಜಿನಿಯರ್ ಕೆಟ್ಟರೆ ಒಂದು ಕಟ್ಟಡ ಬೀಳಬಹುದು. ಆದರೆ ಒಬ್ಬ ಶಿಕ್ಷಕ ಕೆಟ್ಟರೆ ಇಡಿ ಸಮಾಜ ಕೆಡುತ್ತದೆ ಎಂಬ ಪರಿಕಲ್ಪನೆ ಶಿಕ್ಷಕರಲ್ಲಿರಬೇಕು. ಮನುಷ್ಯ ಹುಟ್ಟಿದಂದಿನಿಂದ ಜನಪದ ಹುಟ್ಟಿರುವುದರಿಂದ ಇದನ್ನು ಜೀವತ ಪಳೆಯುಳಿಕೆ ಎಂದು ಹೇಳಲಾಗಿದೆ. ಭಾರತ ದೇಶದ ಸಂಸ್ಕೃತಿ ಗಟ್ಟಿಯಾಗಿರಲು ಜನಪದ ಕಾರಣ ಎಂದರು.

ಹೊಳೆನರಸೀಪುರದ ನಿವೃತ್ತ ಪ್ರಾಂಶುಪಾಲ ಪ್ರಭುಶಂಕರ ಹಿರೇಬೆಳಗುಲಿ ಅವರು, ಭೂಮಿ ಇರುವವರೆಗೂ ಜನಪದ ಹೋಗುವುದಿಲ್ಲ. 12 ನೆ ಶತಮಾನದಲ್ಲಿ ಶರಣರು ಜನಪದ ಮತ್ತು ವಚನವನ್ನು ಕಲಿಸಿದರು. ಅನಕ್ಷರಸ್ಥರು ರಚಿಸಿದ ಜನಪದ ಎಂದೆಂದಿಗೂ ಚಿರಾಯುವಾಗಿದೆ ಎಂದರು.

ಸಾಹಿತಿ ಸೀಚ. ಯತೀಶ್ವರ್ ಅವರು, ಅರಮನೆ ಮತ್ತು ಗುರುಮನೆ ಜನಪದವನ್ನು ಪ್ರೋತ್ಸಾಹಿಸುತ್ತಾ ಬಂದಿದೆ. ಜನಪದ ಮೂಲ ಸಂಸ್ಕೃತಿಯನ್ನು ಮರೆತರೆ ನಮ್ಮ ಬದುಕಿನ ಅಸ್ತಿತ್ವನ್ನು ಕಳೆದುಕೊಳ್ಳುತ್ತೇವೆ. ಜಾನಪದ ಕಲೆಯನ್ನು ನಾವೆಲ್ಲರೂ ಉಳಿಸಿ ಬೆಳೆಸಬೇಕು ಎಂದರು.

ಇದೇ ಸಂದರ್ಭದಲ್ಲಿ ಜನಪದ ಪರಿಷತ್ ತಾಲ್ಲೂಕು ಅಧ್ಯಕ್ಷ ಶಿಕ್ಷಕ ಹಾಗೂ ಸಾಹಿತಿ ಪರಮೇಶ್ ಮಡಬಲು ರವರು ಪ್ರಾಸ್ತಾವಿಕ ಮಾತನಾಡಿದರು.

ಕಾರ್ಯಕ್ರಮದಲ್ಲಿ ಶ್ರೀಮಠದ ಆಡಳಿತ ಅಧಿಕಾರಿ ಎಸ್. ಎಸ್. ಶಿವಮೂರ್ತಿ, ವೀರಶೈವ ಸಂಘದ ಅಧ್ಯಕ್ಷ ಬಿ. ರೇಣುಕಪ್ರಸಾದ್, ಉಪಾಧ್ಯಕ್ಷ ಡಿ. ಎಸ್. ಜಯಣ್ಣ, ಸಹಕಾರ್ಯದರ್ಶಿ ಜಯರಾಜು, ಖಜಾಂಚಿ ವೈ. ಬಿ. ಟೀಕರಾಜು, ವಕೀಲ ಮಹೇಶ್, ತಾಲೂಕು ಪಂಚಾಯತ್ ಮಾಜಿ ಸದಸ್ಯ ನಟರಾಜ್ ನಾಕಲಗೂಡು, ಕಾಫಿ ಬೆಳಗಾರರ ಸಂಘದ ಮಾಜಿ ಅಧ್ಯಕ್ಷ ಮಹೇಶ್ ಚಿಕ್ಕೋಟೆ, ಕರವೇ ತಾಲೂಕು ಆರ್. ಎಸ್. ನಟರಾಜ್, ಜಿಲ್ಲಾ ಕಾರ್ಯದರ್ಶಿ ಎಸ್. ಎಂ. ರಘು ಪಾಳ್ಯ, ಲಯನ್ ಸೇವಾ ಸಂಸ್ಥೆ ಅಧ್ಯಕ್ಷ ಟಿ. ಆರ್. ಆನಂದ್ ಗೃಹಲಕ್ಷ್ಮಿ, ಮಠದ ವಾರ್ತಾ ಸಂಯೋಜಕ ಸತೀಶ್ ಚಿಕ್ಕಕಣಗಾಲು, ವನದುರ್ಗ ಪರಮೇಶ್ವರಿ, ಎಚ್. ಜೆ. ಹರೀಶ್, ಶಿಕ್ಷಕರ ಸಂಘದ ಕಾರ್ಯದರ್ಶಿ ಮಲ್ಲರಾಜೇಗೌಡ,

ದೇವರಾಜ ಶಾಸ್ತ್ರಿಗಳು, ಯಶ್ವಂತ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ 20 ಆದರ್ಶ ಶಿಕ್ಷಕರನ್ನು ಸನ್ಮಾನಿಸಲಾಯಿತು. ಹೊಳೆನರಸೀಪುರ ಸಾವಿತ್ರಿಬಾಯಿ ಫುಲೆ ಮಹಿಳಾ ಶಿಕ್ಷಕಿಯರ ಸಂಘದ ಅಧ್ಯಕ್ಷೆ, ಮಮತಾ ಮತ್ತು ಉಮೇಶ್ ತಂಡದವರು ಜನಪದ ಗೀತೆಗಳನ್ನು ಹಾಡಿ ರಂಜಿಸಿದರು. ಟಿ.ತಿಮ್ಮನಹಳ್ಳಿಯ ಮೊಗಮ್ಮ ಮತ್ತು ತಂಡದವರು ಸೋಬಾನ ಗೀತೆ ಹಾಡಿದರು.

# ಪೋಡಿ ಸಮಸ್ಯೆ ಬಗೆಹರಿಸಲು ಒತ್ತಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹೇಮಾವತಿ ಜಲಾಶಯ ಯೋಜನೆಯಿಂದ ಸಂತ್ರಸ್ತರಾದ ಜಿಲ್ಲೆಯ 8,273 ರೈತ ಕುಟುಂಬಗಳಿಗೆ ಸಂಬಂಧಿಸಿದ ಜಮೀನುಗಳ ಪೋಡಿ ಹಾಗೂ ಸಾಗುವಳಿ ಚೀಟಿ ಸಮಸ್ಯೆಯನ್ನು ಶೀಘ್ರ ಬಗೆಹರಿಸಬೇಕೆಂದು ಸಂತ್ರಸ್ತರ ಹೋರಾಟ ಸಮಿತಿ ಗೌರವಾಧ್ಯಕ್ಷ ಆರ್.ಪಿ. ವೆಂಕಟೇಶ್‌ಮೂರ್ತಿ ಒತ್ತಾಯಿಸಿದರು.




ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಹೇಮಾವತಿ ಜಲಾಶಯ ನಿರ್ಮಾಣದಿಂದ ಸಂತ್ರಸ್ತರಾದ ರೈತ ಕುಟುಂಬಗಳಿಗೆ ಆಗಿನ ಸರ್ಕಾರ 1972ರಲ್ಲಿ ಜಮೀನು ಮಂಜೂರು ಮಾಡಿದ್ದು, ಪಹಣಿ ನೀಡಿ ಅಂದೇ ಪೋಡಿ ಶುಲ್ಕವನ್ನೂ ಪಾವತಿಸಿಕೊಂಡಿದೆ. ಆದರೆ 54 ವರ್ಷ ಕಳೆದರೂ ಇನ್ನೂ ಎಲ್ಲ ಜಮೀನುಗಳಿಗೆ ಸಮರ್ಪಕ ಪೋಡಿ ಮಾಡಿಕೊಟ್ಟಿಲ್ಲ ಎಂದು ದೂರಿದರು.

ಜಿಲ್ಲಾಧಿಕಾರಿ ಕೆ.ಎಸ್ ಲತಾಕುಮಾರಿ ಅವರು ಹಾಸನಕ್ಕೆ ಬಂದ ಹೊಸದರಲ್ಲಿ ಸಂತ್ರಸ್ತರ ಸಮಸ್ಯೆಗಳಿಗೆ ಆದ್ಯತೆ ನೀಡಿ ಪೋಡಿ ನೀಡುವ ಪ್ರಕ್ರಿಯೆ ಆರಂಭಿಸಿದ್ದರು. ಆದರೆ ಎಸ್‌ಎಲ್‌ಒ ಅವರು ಸಂತ್ರಸ್ತರಿಗೆ ಸಂಬಂಧಿಸಿದ ದಾಖಲೆ ನೈಜತೆಯಿಂದ ಕೂಡಿಲ್ಲ ಎಂದು ವರದಿ ನೀಡಿದರು ಎಂಬ ಕಾರಣಕ್ಕೆ ಪ್ರಕ್ರಿಯೆ ಸ್ಥಗಿತಗೊಂಡಿದೆ ಎಂದರು.

ಸುಮಾರು 40 ಹಳ್ಳಿಗಳ ಸಂತ್ರಸ್ತ ರೈತರಿಗೆ ಸಾಗುವಳಿ ಚೀಟಿ ಹಾಗೂ ಪಹಣಿ ನೀಡಿದ ಬಳಿಕ ಸಂತ್ರಸ್ತರ ವಶಕ್ಕೆ ಜಮೀನು ನೀಡಿದೆ. ಆದರೀಗ ದಾಖಲೆಗಳು ನೈಜತೆಯಿಂದ ಕೂಡಿಲ್ಲ ಎಂದು ಅಧಿಕಾರಿ ವರದಿ ಮಾಡುವುದು ಸಮಸ್ಯೆ ಪರಿಹಾರ ಬದಲು ಕಗ್ಗಂಟಾಗಿಸಿದೆ ಎಂದು ಆರೋಪಿಸಿದರು.

54 ವರ್ಷಗಳಿಂದ ಹಕ್ಕುಪತ್ರ ದಾಖಲೆ ಕೊಡದ ಸರ್ಕಾರಕ್ಕೆ ನಾಚಿಗೆ ಆಗಬೇಕು. ಅಧಿಕಾರಿಗಳು ಈ ವಿಚಾರದಲ್ಲಿ ಜವಾಬ್ದಾರಿಯಿಂದ ನಡೆದುಕೊಳ್ಳಬೇಕೆಂದರು.

ಸಂತ್ರಸ್ತರ ವಿಚಾರದಲ್ಲಿ ಅನುಮಾನ ವ್ಯಕ್ತಪಡಿಸುತ್ತಿರುವವರು, ನೈಜ ಸಂತ್ರಸ್ತರಲ್ಲದವರನ್ನು ಹೊರ ಹಾಕಬೇಕಲ್ಲವೇ ಎಂದು ಪ್ರಶ್ನಿಸಿದರು.

ಈವರೆಗೆ ಕೇವಲ ಶೇ.10 ರಷ್ಟು ರೈತರಿಗೆ ಪೋಡಿ ನೀಡಲಾಗಿದೆ. ಉಳಿದವರಿಗೂ ಪೋಡಿ ನೀಡಲು ಕೂಡಲೇ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ನಾವೂ ಹೋರಾಟಕ್ಕೆ ಇಳಿಯಬೇಕಾಗುತ್ತದೆ ಎಂದು ಎಚ್ಚರಿಸಿದದ ಅವರು, ಸಂತ್ರಸ್ತರ ಹೆಸರಿನಲ್ಲಿ ಅಕ್ರಮವಾಗಿ ಜಮೀನು ಮಂಜೂರು ಮಾಡಿಸಿಕೊಂಡವರ ಪರವಾಗಿ ಸಂಘಟನೆ ಕೆಲಸ ಮಾಡುತ್ತಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಸೆ. 5ರಂದು ಡಿಸಿ ಕಚೇರಿ ಆವರಣದಲ್ಲಿ ನಡೆದ ಪ್ರಜಾ ಸೇವಾ ಆಂದೋಲನಾ ಕಾರ್ಯಕ್ರಮದಲ್ಲಿ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರು ಅಧಿಕಾರಿಗಳಿಗೆ 1 ತಿಂಗಳೊಳಗೆ ಸಂತ್ರಸ್ತ ರೈತರ ಜಮೀನುಗಳ ದುರಸ್ತಿ ಕಾರ್ಯ ಮುಗಿಸಿ ಎಂದು ಸೂಚಿಸಿದ್ದಾರೆ. ಒಂದಲ್ಲ ನಾವು 6 ತಿಂಗಳು ಕಾಯಲು ಸಿದ್ಧರಿದ್ದೇವೆ, ಸಮಸ್ಯೆ ಬಗೆಹರಿಸಿ ಎಂದರು.

ಪೋಡಿ ದುರಸ್ತಿ ತ್ವರಿತವಾಗಿ ಪೂರ್ಣಗೊಳಿಸಲು ಅಗತ್ಯವಿದ್ದರೆ ಹೆಚ್ಚಿನ ಅಧಿಕಾರಿಗಳು ಹಾಗೂ ಸಿಬ್ಬಂದಿ ನಿಯೋಜಿಸಿಕೊಳ್ಳಿ ಎಂದು ಸಚಿವರು ಸೂಚಿಸಿದ್ದಾರೆ. ಜಿಲ್ಲಾಡಳಿತ ಈ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಬೇಕು ಎಂದು ಮನವಿ ಮಾಡಿದರು.

ಪ್ರತಿ ತಿಂಗಳು ಕನಿಷ್ಠ 10 ಪುನರ್ವಸತಿ ಗ್ರಾಮಗಳಲ್ಲಿ ದುರಸ್ತಿ ಕಾರ್ಯ ಪೂರ್ಣಗೊಳಿಸಿ, 6 ತಿಂಗಳೊಳಗೆ ಸಂತ್ರಸ್ತ ರೈತರ ಜಮೀನು ಸಮಸ್ಯೆ ಬಗೆಹರಿಸಬೇಕು ಎಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಹೋರಾಟ ಸಮಿತಿಯ ಲೋಕೇಶ್, ಚಂದ್ರಶೇಖರ್, ಜಯರಾಮ್, ಬಸವರಾಜೇಗೌಡ, ರಾಜೇಗೌಡ ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248